ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಸರ್ಕಾರಿ ಆಸ್ಪತ್ರೆಗಳ ವೈದ್ಯರು ಮತ್ತು ಸಿಬ್ಬಂದಿ ಹುದ್ದೆಗಳ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

997 (1052) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ 146 ತಾಲ್ಲೂಕುಗಳಲ್ಲಿ ತಾಲ್ಲುಕುವಾರು ABEYANCE POST ವೈದ್ಯರುಗಳು ಎಷ್ಟು; ಎಲ್ಲಾ ಆಸ್ಪತ್ರೆಗಳಲ್ಲಿ ಈ ವೈದ್ಯರುಗಳನ್ನು ನಿಯೋಜಿಸಲಾಗಿದೆಯೇ ಇದ್ದಲ್ಲಿ, ಮಾಹಿತಿ ನೀಡುವುದು; ಇಲ್ಲವಾದ್ದಲ್ಲಿ, ಯಾವ ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರುಗಳು ಇರುವುದಿಲ್ಲ; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ಪತ್ರೆಗಳಲ್ಲಿ ರೆಡಿಯಾಲಿಜಿಸ್ಟ್ ಮತ್ತು ಸ್ಕ್ಯಾನಿಂಗ್ ಡಾಕ್ಟರ್ ವೈದ್ಯರುಗಳನ್ನು ನಿಯೋಜಿಸಲಾಗಿದೆಯೇ ಅಥವಾ ಇಲ್ಲವೇ; (ಪೂರ್ಣ ಮಾಹಿತಿ ನೀಡುವುದು)

(ಇ) 100 ಹಾಸಿಗೆ ಹೊಂದಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಪೂರ್ಣ ಪ್ರಮಾಣದ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿರುವ 100 ಹಾಸಿಗೆ ಹೊಂದಿರುವ ಆಸ್ಪತ್ರೆಗಳು ಯಾವುವು; (ಮಾಹಿತಿ ನೀಡುವುದು)

(ಈ) ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಲ್ಲಿ ಚರ್ಮ ಮತ್ತು ಸ್ಕ್ಯಾನಿಂಗ್ ವೈದ್ಯರುಗಳನ್ನು ಪೂರ್ಣ ಪ್ರಮಾಣದಲ್ಲಿ ಭರ್ತಿ ಮಾಡಲಾಗಿದೆಯೇ? (ಪೂರ್ಣ ಮಾಹಿತಿ ನೀಡುವುದು)